**ಕರ್ನಾಟಕ ಸರ್ಕಾರ**

**ಸಹಕಾರ ಚುನಾವಣಾ ಪ್ರಾಧಿಕಾರ**

**ಸಂಖ್ಯೆ: ಸಚುಪ್ರಾ/ಪ್ರಾಸಂಚು/43/2018-19**

3ನೇ ಮಹಡಿ, ಟಿ.ಟಿ.ಎಂ.ಸಿ.ಕಟ್ಟಡ "ಎ"ಬ್ಲಾಕ್,
ಶಾಂತಿನಗರ, ಬೆಂಗಳೂರು-560027
**ದಿನಾಂಕ:29.09.2018**

**ವಿಷಯ:** ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ, 1959 ಮತ್ತು ನಿಯಮಗಳು 1960ರ ನಿಯಮ 2(ಐ-1) ಮತ್ತು 13ಬಿಬಿ ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997 ಮತ್ತು ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು 2004 ನಿಯಮ 2(ಜಿ-2) ರಂತೆ ದಿನಾಂಕ 01.01.2019ರಿಂದ 31.12.2019ರವರೆಗೆ ಪದಾವಧಿ ಮುಗಿಯಲಿರುವ ಎಲ್ಲಾ ರೀತಿಯ ಪ್ರಾಥಮಿಕ ಸಹಕಾರ ಸಂಘಗಳ/ಸಹಕಾರಿಗಳ ಆಡಳಿತ ಮಂಡಲಿ ಚುನಾವಣೆ ನಡೆಸಲು ಚುನಾವಣಾಧಿಕಾರಿಗಳನ್ನು ನೇಮಕಾತಿ ಮಾಡುವ ಬಗ್ಗೆ.

**ಉಲ್ಲೇಖ:**
1. (ಸರ್ಕಾರದ ಪತ್ರ ಸಂಖ್ಯೆ: ಸಿಒ 217 ಸಿಎಲ್ಎಂ 2015 ದಿನಾಂಕ 7.12.2015)/ಸಹಕಾರ ಸಂಘಗಳ ನಿಬಂಧಕರ ಪತ್ರ ಸಂಖ್ಯೆ: ಅರ್ಎಸ್ಆರ್/ಎಕ್ಸ್ಎಂಸಿ/ಚುನ.ನೇ/124/2015-16 ದಿನಾಂಕ 08.12.2015
2. ಸಹಕಾರ ಚುನಾವಣಾ ಪ್ರಾಧಿಕಾರದ ಆದೇಶ ಸಂಖ್ಯೆ:ಸಚುಪ್ರಾ/ಚು.ಅ.ನೇ/05/2017 ದಿನಾಂಕ:01.08.2017
3. ಸಹಕಾರ ಸಂಘಗಳ ಉಪನಿಬಂಧಕರು, ಬೆಳಗಾವಿ ಜಿಲ್ಲೆ ಇವರ ಪತ್ರ ಸಂ:ಡಿಆರ್ಎಲ್/ಚುನಾವಣೆ/98/2018-19 ದಿನಾಂಕ: 15-09-2018

★★★

**ಪ್ರಸ್ತಾವನೆ**

ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960ರ ನಿಯಮ 13ಬಿಬಿ ರಂತೆ, ಮೊದಲನೇ ಹಂತದ ಪ್ರಾಥಮಿಕ ಸಹಕಾರ ಸಂಘಗಳ/ ಸಹಕಾರಿಗಳ ಆಡಳಿತ ಮಂಡಲಿ ಸದಸ್ಯರ, ಸಾಮಾನ್ಯ, ಖಾಲಿಬಿದ್ದ ಸ್ಥಾನ ಮತ್ತು ಹೊಸದಾಗಿ ನೋಂದಣಿಯಾದ ಸಹಕಾರ ಸಂಘಗಳು/ಸಹಕಾರಿಗಳ ಚುನಾವಣೆಯನ್ನು ನಡೆಸಲು ಚುನಾವಣಾ ಪ್ರಾಧಿಕಾರವು ದಿನಾಂಕ 01.01.2018 ರಿಂದ 31.12.2018ರವರೆಗೆ ಉಲ್ಲೇಖ(2)ರ ಆದೇಶದಲ್ಲಿ ಚುನಾವಣಾಧಿಕಾರಿಗಳನ್ನು ನೇಮಕಾತಿ ಮಾಡಲಾಗಿದೆ.

ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960ರ ನಿಯಮ 13ಬಿಬಿ ರಲ್ಲಿ ಪ್ರದತ್ತವಾದ ಅಧಿಕಾರದಂತೆ, 2019ನೇ ಸಾಲಿನಲ್ಲಿ ಅಂದರೆ ದಿನಾಂಕ: 01.01.2019 ರಿಂದ 31.12.2019ರವರೆಗೆ ಆಡಳಿತ ಮಂಡಲಿ ಪದಾವಧಿ ಮುಕ್ತಾಯವಾಗಲಿರುವ ಪ್ರಾಥಮಿಕ ಸಹಕಾರ ಸಂಘಗಳ/ ಸಹಕಾರಿಗಳ ಆಡಳಿತ ಮಂಡಲಿಯ ಸದಸ್ಯರ, ಸಾಮಾನ್ಯ, ಖಾಲಿಬಿದ್ದ ಸ್ಥಾನ ಮತ್ತು ಹೊಸದಾಗಿ ನೋಂದಣಿಯಾದ ಸಹಕಾರ ಸಂಘಗಳಿಗೆ/ ಸಹಕಾರಿಗಳಿಗೆ ಆಡಳಿತ ಮಂಡಲಿ ಚುನಾವಣೆ ತತ್ಪರಿಣಾಮ ಪದಾಧಿಕಾರಿಗಳ ಚುನಾವಣೆ ನಡೆಸಲು ಚುನಾವಣಾಧಿಕಾರಿಗಳನ್ನು ನೇಮಿಸಬೇಕಾಗಿರುತ್ತದೆ.

ಜಿಲ್ಲಾ ಉಪನಿಬಂಧಕರು, ಬೆಳಗಾಂ ಇವರು ತಮ್ಮ ಉಲ್ಲೇಖ (3)ರ ಪತ್ರದಂತೆ ಪ್ರಸ್ತಾವನೆ ಸಲ್ಲಿಸಿ ದಿನಾಂಕ: 01.01.2019 ರಿಂದ 31.12.2019ರವರೆಗೆ ಹೆಚ್ಚಿನ ಸಹಕಾರ ಸಂಘಗಳ ಚುನಾವಣೆ ನಡೆಯಬೇಕಾಗಿದ್ದು, ಅದರಲ್ಲೂ ಸುಮಾರು 1219 ಸಹಕಾರ ಸಂಘಗಳ ಚುನಾವಣೆ ಫೆಬ್ರವರಿ 2019ರಲ್ಲಿ ನಡೆಯಬೇಕಾಗಿರುತ್ತದೆ. ಆದ್ದರಿಂದ, ತಾಲ್ಲೂಕು ಮಟ್ಟಕ್ಕಿಂತ ಕಡಿಮೆ ವ್ಯಾಪ್ತಿ ಇರುವ ಸಹಕಾರ ಸಂಘಗಳಿಗೆ ಹೆಚ್ಚುವರಿ ಚುನಾವಣಾಧಿಕಾರಿಗಳನ್ನು ನೇಮಿಸಲು ಕೋರಿರುತ್ತಾರೆ.

ಮುಂದುವರೆದು, ದಿನಾಂಕ:24-09-2018 ಮತ್ತು 25-09-2018ರಂದು ಜಿಲ್ಲೆಯ ಚುನಾವಣಾಧಿಕಾರಿ ಗಳೊಂದಿಗೆ ಚುನಾವಣೆ ವಿಷಯದ ಬಗ್ಗೆ ಚರ್ಚಿಸಲಾಗಿ, ಕಂಡು ಬಂದ ಅಂಶವೇನೆಂದರೆ, ಬಹಳಷ್ಟು ಕಡೆ ನಿಗದಿತ ಅವಧಿಯಲ್ಲಿ ಚುನಾವಣೆ ನಡೆಸದೇ ಇದ್ದು, ಆಡಳಿತಾಧಿಕಾರಿಗಳನ್ನು ನೇಮಿಸಿರುವುದನ್ನು ಗಮನಿಸಲಾಗಿದೆ. ಆದರೆ, ಕಾಯ್ದೆ ಮತು ನಿಯಮಗಳ ಪ್ರಕಾರ ಆಡಳಿತ ಮಂಡಲಿಯ ಅಧಿಕಾರಾವಧಿ ಮುಗಿಯುವುದರೊಳಗೆ ಚುನಾವಣೆಯನ್ನು ನಿಗದಿತ ವೇಳೆಯಲ್ಲಿ ನಡೆಸಬೇಕಾಗಿರುತ್ತದೆ. ಇದರಿಂದ ಕೆಲವು ಚುನಾವಣಾಧಿಕಾರಿಗಳಿಗೆ ನಿಗದಿಪಡಿಸಿರುವ ವ್ಯಾಪ್ತಿಯನ್ನು ಬದಲಾಯಿಸುವುದು ಸೂಕ್ತವೆಂದು ಅಭಿಪ್ರಾಯಿಸಿದೆ.

ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960 (2015ರ ತಿದ್ದುಪಡಿ)ರ ನಿಯಮ 2(ಐ-1) ಮತ್ತು ನಿಯಮ 13ಬಿಬಿ ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು 2004 (2015ರ ತಿದ್ದುಪಡಿ)ರ ನಿಯಮ 2(ಜಿ-2)ಗಳಂತೆ ಮೊದಲನೇ ಹಂತದ ಪ್ರಾಥಮಿಕ ಸಹಕಾರ ಸಂಘಗಳ/ಸಹಕಾರಿಗಳ ಆಡಳಿತ ಮಂಡಳಿಯ ಸಾಮಾನ್ಯ ಚುನಾವಣೆ ಮತ್ತು ಪದಾಧಿಕಾರಿಗಳ ಚುನಾವಣೆ, ಹೊಸದಾಗಿ ನೋಂದಣಿಯಾದ, ಆಕಸ್ಮಿಕವಾಗಿ ತೆರವಾದ ಮತ್ತು ಆಡಳಿತಾಧಿಕಾರಿ /ವಿಶೇಷಾಧಿಕಾರಿ ನೇಮಕಗೊಂಡ ಸಹಕಾರ ಸಂಘಗಳ/ಸಹಕಾರಿಗಳ ಆಡಳಿತ ಮಂಡಲಿ ಚುನಾವಣೆಗಳನ್ನು ನಡೆಸಲು ಚುನಾವಣಾಧಿಕಾರಿಗಳನ್ನು ನೇಮಕಾತಿ ಮಾಡಿ ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

## ಆದೇಶ

**ಸಂಖ್ಯೆ: ಸಚುಪ್ರಾ/ಪ್ರಾಸಂಚು/43/2018-19** **ದಿನಾಂಕ:29.09.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960 (2015ರ ತಿದ್ದುಪಡಿ) ನಿಯಮ 2(ಐ-1), ನಿಯಮ 13ಬಿಬಿ ರಂತೆ ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು 2004 (2015ರ ತಿದ್ದುಪಡಿ) ನಿಯಮ 2(ಜಿ-2) ರಂತೆ ಸಹಕಾರ ಚುನಾವಣಾ ಪ್ರಾಧಿಕಾರಕ್ಕೆ ದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ, ಡಾ. ಎನ್.ಎಸ್. ಚನ್ನಪ್ಪಗೌಡ, ಆಯುಕ್ತರು, ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು ಆದ ನಾನು ಮೊದಲನೇ ಹಂತದ ಪ್ರಾಥಮಿಕ ಸಹಕಾರ ಸಂಘಗಳ/ಸಹಕಾರಿಗಳ ಆಡಳಿತ ಮಂಡಲಿಯ ಸಾಮಾನ್ಯ ಚುನಾವಣೆ ಮತ್ತು ಪದಾಧಿಕಾರಿಗಳ ಚುನಾವಣೆ, ಹೊಸದಾಗಿ ನೋಂದಣಿಯಾದ ಸಹಕಾರ

--3

ಸಂಘಗಳ/ಸಹಕಾರಿಗಳ ಆಡಳಿತ ಮಂಡಲಿ ಚುನಾವಣೆ, ಆಕಸ್ಮಿಕವಾಗಿ ತೆರವಾದ ಮತ್ತು ಆಡಳಿತಾಧಿಕಾರಿ/ವಿಶೇಷಾಧಿಕಾರಿ ನೇಮಕಗೊಂಡ ಸಹಕಾರ ಸಂಘಗಳ/ಸಹಕಾರಿಗಳ ಆಡಳಿತ ಮಂಡಲಿ ಚುನಾವಣೆಗಳನ್ನು ನಡೆಸಲು ಈ ಕೆಳಕಂಡ ಅಧಿಕಾರಿಗಳನ್ನು ಕೋಷ್ಟಕದಲ್ಲಿ ತಿಳಿಸಿರುವ ಪ್ರಾಥಮಿಕ ಸಹಕಾರ ಸಂಘಗಳಿಗೆ /ಪ್ರಾಥಮಿಕ ಸಹಕಾರಿ ಸಂಸ್ಥೆಗಳಿಗೆ ಚುನಾವಣಾಧಿಕಾರಿಗಳನ್ನಾಗಿ ದಿನಾಂಕ 01.01.2019 ರಿಂದ 31.12.2019ರವರೆಗೆ ನೇಮಕಾತಿ ಮಾಡಿ ಆದೇಶಿಸಿರುತ್ತೇನೆ.

| ಕ್ರ ಸಂ. | ಚುನಾವಣಾಧಿಕಾರಿಯಾಗಿ ನೇಮಕಗೊಳಿಸಲ್ಪಟ್ಟ ಅಧಿಕಾರಿ | ಚುನಾವಣಾಧಿಕಾರಿಯ ವ್ಯಾಪ್ತಿಗೆ ಬರುವ ಸಹಕಾರ ಸಂಘಗಳು / ಸೌಹಾರ್ದ ಸಹಕಾರಿಗಳು |
|---|---|---|
| 1 | ಎಲ್ಲಾ ಜಿಲ್ಲೆಯ ಸಹಕಾರ ಸಂಘಗಳ ಉಪ ನಿಬಂಧಕರು ಹಾಗೂ ಬೆಂಗಳೂರು ನಗರ ಜಿಲ್ಲೆಯ ಉಪ ನಿಬಂಧಕರು 1, 2, 3 ಮತ್ತು 4 (ಬೆಳಗಾವಿ ಜಿಲ್ಲೆ ಹೊರತುಪಡಿಸಿ) | ಆಯಾ ಜಿಲ್ಲೆಯ ತಾಲ್ಲೂಕು ಮಟ್ಟಕ್ಕಿಂತ ಕಡಿಮೆ ಕಾರ್ಯವ್ಯಾಪ್ತಿ ಹೊಂದಿರುವ; (ಬೆಳಗಾವಿ ಜಿಲ್ಲೆ ಹೊರತುಪಡಿಸಿ)<br>ಎಲ್ಲಾ ವಿಧದ ಪ್ರಾಥಮಿಕ ಸಹಕಾರ ಸಂಘಗಳು/ ಪ್ರಾಥಮಿಕ ಸೌಹಾರ್ದ ಸಹಕಾರಿಗಳು |
| 2 | ಎ) ಸಹಕಾರ ಸಂಘಗಳ ಉಪ ನಿಬಂಧಕರು, ಬೆಳಗಾವಿ ಜಿಲ್ಲೆ; | ಬೈಲಹೊಂಗಲ ಉಪವಿಭಾಗದ ತಾಲ್ಲೂಕು ಮಟ್ಟಕ್ಕಿಂತ ಕಡಿಮೆ ಕಾರ್ಯವ್ಯಾಪ್ತಿ ಹೊಂದಿರುವ;<br>ಎಲ್ಲಾ ವಿಧದ ಪ್ರಾಥಮಿಕ ಸಹಕಾರ ಸಂಘಗಳು/ ಪ್ರಾಥಮಿಕ ಸೌಹಾರ್ದ ಸಹಕಾರಿಗಳು. |
| | ಬಿ) ಕೇಂದ್ರ ಸ್ಥಾನಿಕ ಸಹಾಯಕರು (H.Q.A), ಬೆಳಗಾವಿ ಪ್ರಾಂತ ಜಂಟಿ ನಿಬಂಧಕರ ಕಛೇರಿ, ಬೆಳಗಾಂ. | ಬೆಳಗಾಂ ಉಪವಿಭಾಗದ ತಾಲ್ಲೂಕು ಮಟ್ಟಕ್ಕಿಂತ ಕಡಿಮೆ ಕಾರ್ಯವ್ಯಾಪ್ತಿ ಹೊಂದಿರುವ;<br>ಎಲ್ಲಾ ವಿಧದ ಪ್ರಾಥಮಿಕ ಸಹಕಾರ ಸಂಘಗಳು/ ಪ್ರಾಥಮಿಕ ಸೌಹಾರ್ದ ಸಹಕಾರಿಗಳು. |
| | ಸಿ) ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಸಹಾಯಕ ನಿರ್ದೇಶಕರು, ಲೆಕ್ಕಪರಿಶೋಧನಾ ಇಲಾಖೆ, ಚಿಕ್ಕೋಡಿ. | ಚಿಕ್ಕೋಡಿ ಉಪವಿಭಾಗದ ತಾಲ್ಲೂಕು ಮಟ್ಟಕ್ಕಿಂತ ಕಡಿಮೆ ಕಾರ್ಯವ್ಯಾಪ್ತಿ ಹೊಂದಿರುವ;<br>ಎಲ್ಲಾ ವಿಧದ ಪ್ರಾಥಮಿಕ ಸಹಕಾರ ಸಂಘಗಳು/ ಪ್ರಾಥಮಿಕ ಸೌಹಾರ್ದ ಸಹಕಾರಿಗಳು. |
| 3 | ಎಲ್ಲಾ ಪ್ರಾಂತೀಯ ಸಹಕಾರ ಸಂಘಗಳ ಜಂಟಿ ನಿಬಂಧಕರು | ತಾಲ್ಲೂಕು ಮಟ್ಟ ಹಾಗೂ ಜಿಲ್ಲಾ ಮಟ್ಟಕ್ಕಿಂತ ಕಡಿಮೆ ಕಾರ್ಯವ್ಯಾಪ್ತಿ ಹೊಂದಿರುವ;<br>ಎಲ್ಲಾ ವಿಧದ ಪ್ರಾಥಮಿಕ ಸಹಕಾರ ಸಂಘಗಳು/ ಪ್ರಾಥಮಿಕ ಸೌಹಾರ್ದ ಸಹಕಾರಿಗಳು. (ಬೆಂಗಳೂರು ನಗರ ಜಿಲ್ಲೆ ಹೊರತುಪಡಿಸಿ) |

--4

| | | |
|---|---|---|
| 4 | ಸಹಕಾರ ಸಂಘಗಳ ಜಂಟಿ ನಿಬಂಧಕರು, ಬೆಂಗಳೂರು ಪ್ರಾಂತ (ಬೆಂಗಳೂರು ನಗರ ಜಿಲ್ಲೆಗೆ ಸಂಬಂಧಿಸಿದಂತೆ) | ಬೆಂಗಳೂರು ನಗರ ಜಿಲ್ಲೆಯ ತಾಲ್ಲೂಕು ಮಟ್ಟ ಕಾರ್ಯವ್ಯಾಪ್ತಿ ಹೊಂದಿರುವ; (ಬೆಂಗಳೂರು ನಗರ ಜಿಲ್ಲೆಗೆ ಸಂಬಂಧಿಸಿದಂತೆ)<br>ಎಲ್ಲಾ ವಿಧದ ಪ್ರಾಥಮಿಕ ಸಹಕಾರ ಸಂಘಗಳು/ ಪ್ರಾಥಮಿಕ ಸೌಹಾರ್ದ ಸಹಕಾರಿಗಳು |
| 5 | ಸಹಕಾರ ಸಂಘಗಳ ಜಂಟಿ ನಿಬಂಧಕರು (ಪಟ್ಟಣ ಬ್ಯಾಂಕುಗಳ ವಿಭಾಗ), ಕೇಂದ್ರ ಕಛೇರಿ, ಬೆಂಗಳೂರು. | ಜಿಲ್ಲಾ ಮಟ್ಟ ಹಾಗೂ ಪ್ರಾಂತೀಯ ಮಟ್ಟದ ಕಾರ್ಯವ್ಯಾಪ್ತಿ ಹೊಂದಿರುವ;<br>ಎಲ್ಲಾ ವಿಧದ ಪ್ರಾಥಮಿಕ ಸೌಹಾರ್ದ ಸಹಕಾರಿಗಳು (ಬೆಂಗಳೂರು ಮತ್ತು ಮೈಸೂರು ಪ್ರಾಂತಕ್ಕೆ ಸೇರಿದ) |
| 6 | ಸಹಕಾರ ಸಂಘಗಳ ಅಪರ ನಿಬಂಧಕರು, ಕಾಡಾ, ಬೆಳಗಾವಿ (ಸರ್ಕಾರದ ಅಧಿಸೂಚನೆ ಸಂಖ್ಯೆ:ಸಇ/ 425/ಎಸಸೇ/2015,ದಿ:05/03/ 2016ರಲ್ಲಿ ಜಂಟಿ ನಿಬಂಧಕರ ಹುದ್ದೆಯನ್ನು ಅಪರ ನಿಬಂಧಕರ ಹುದ್ದೆಗೆ ಉನ್ನತೀಕರಣ ಗೊಳಿಸಿದೆ) | ಜಿಲ್ಲಾ ಮಟ್ಟ ಹಾಗೂ ಪ್ರಾಂತೀಯ ಮಟ್ಟದ ಕಾರ್ಯವ್ಯಾಪ್ತಿ ಹೊಂದಿರುವ; (ಬೆಳಗಾವಿ ಪ್ರಾಂತಕ್ಕೆ ಸಂಬಂಧಿಸಿದಂತೆ)<br>ಎಲ್ಲಾ ವಿಧದ ಪ್ರಾಥಮಿಕ ಸಹಕಾರ ಸಂಘಗಳು /ಪ್ರಾಥಮಿಕ ಸೌಹಾರ್ದ ಸಹಕಾರಿಗಳು |
| 7 | ಸಹಕಾರ ಸಂಘಗಳ ಜಂಟಿ ನಿಬಂಧಕರು, ಕಾಡಾ, ಕಲಬುರಗಿ | ಜಿಲ್ಲಾ ಮಟ್ಟ ಹಾಗೂ ಪ್ರಾಂತೀಯ ಮಟ್ಟದ ಕಾರ್ಯವ್ಯಾಪ್ತಿ ಹೊಂದಿರುವ; (ಕಲಬುರಗಿ ಪ್ರಾಂತಕ್ಕೆ ಸಂಬಂಧಿಸಿದಂತೆ)<br>ಎಲ್ಲಾ ವಿಧದ ಪ್ರಾಥಮಿಕ ಸಹಕಾರ ಸಂಘಗಳು/ಪ್ರಾಥಮಿಕ ಸೌಹಾರ್ದ ಸಹಕಾರಿಗಳು |
| 8 | ಸಹಕಾರ ಸಂಘಗಳ ಜಂಟಿ ನಿಬಂಧಕರು (ಕಾನೂನು ಕೋಶ), ಕೇಂದ್ರ ಕಛೇರಿ, ಬೆಂಗಳೂರು. | ಜಿಲ್ಲಾ ಮಟ್ಟ ಹಾಗೂ ಪ್ರಾಂತೀಯ ಮಟ್ಟದ ಕಾರ್ಯವ್ಯಾಪ್ತಿ ಹೊಂದಿರುವ; (ಬೆಂಗಳೂರು ಮತ್ತು ಮೈಸೂರು ಪ್ರಾಂತಕ್ಕೆ ಸಂಬಂಧಿಸಿದಂತೆ)<br>ಪ್ರಾಥಮಿಕ ಕೃಷಿಯೇತರ ಪತ್ತಿನ ಸಹಕಾರ ಸಂಘಗಳು /ಪಟ್ಟಣ ಸಹಕಾರ ಬ್ಯಾಂಕುಗಳು. |
| | | ಬೆಂಗಳೂರು ನಗರ ಜಿಲ್ಲೆಗೆ ಸಂಬಂಧಿಸಿದಂತೆ; ತಾಲ್ಲೂಕು ಮಟ್ಟಕ್ಕೆ ಮೇಲ್ಪಟ್ಟು ಹಾಗೂ ಪ್ರಾಂತೀಯ ಮಟ್ಟದ ಕಾರ್ಯವ್ಯಾಪ್ತಿಯನ್ನು ಹೊಂದಿರುವ;<br>ಪ್ರಾಥಮಿಕ ಕೃಷಿಯೇತರ ಪತ್ತಿನ ಸಹಕಾರ ಸಂಘಗಳು /ಪಟ್ಟಣ ಸಹಕಾರ ಬ್ಯಾಂಕುಗಳು. |

--5

| | | |
|---|---|---|
| 9 | **ಕೇಂದ್ರ ಕಛೇರಿಯ ಸಹಕಾರ ಸಂಘಗಳ ಅಪರ ನಿಬಂಧಕರುಗಳು (ಮಾಧ್ಯಮಿಕ, ಫೆಡರಲ್ ಮತ್ತು ಅಪೆಕ್ಸ್ ಸಹಕಾರ ಸಂಸ್ಥೆಗಳನ್ನು ಹೊರತುಪಡಿಸಿ) ಉಳಿದಂತೆ ಅವರವರ ವಿಭಾಗಕ್ಕೆ ಸಂಬಂಧಿಸಿದ ಪ್ರಾಥಮಿಕ ಸಹಕಾರ ಸಂಘಗಳು** | **ಜಿಲ್ಲಾ ಮಟ್ಟ ಹಾಗೂ ಪ್ರಾಂತೀಯ ಮಟ್ಟ ಕಾರ್ಯವ್ಯಾಪ್ತಿ ಹೊಂದಿರುವ; (ಬೆಂಗಳೂರು ಮತ್ತು ಮೈಸೂರು ಪ್ರಾಂತ)**<br>ಅವರವರ ವ್ಯಾಪ್ತಿಗೆ ಸಂಬಂಧಿಸಿದ ಪ್ರಾಥಮಿಕ ಸಹಕಾರ ಸಂಘಗಳು |
| | | **ಬೆಂಗಳೂರು ನಗರ ಜಿಲ್ಲೆಗೆ ಸಂಬಂಧಿಸಿದಂತೆ ತಾಲ್ಲೂಕು ಮಟ್ಟಕ್ಕೆ ಮೇಲ್ಪಟ್ಟು ಹಾಗೂ ಪ್ರಾಂತೀಯ ಮಟ್ಟದ ಕಾರ್ಯವ್ಯಾಪ್ತಿ ಹೊಂದಿರುವ;**<br>ಅವರವರ ವ್ಯಾಪ್ತಿಗೆ ಸಂಬಂಧಿಸಿದ ಪ್ರಾಥಮಿಕ ಸಹಕಾರ ಸಂಘಗಳು |
| 10 | ಸಹಕಾರ ಸಂಘಗಳ ಜಂಟಿ ನಿಬಂಧಕರು –(ಚುನಾವಣಾ ವಿಭಾಗ)<br>ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು | **ಪ್ರಾಂತೀಯ ಮಟ್ಟಕ್ಕೂ ಮೇಲ್ಪಟ್ಟು ಹಾಗೂ ರಾಜ್ಯ ಮಟ್ಟದ ಕಾರ್ಯವ್ಯಾಪ್ತಿ ಹೊಂದಿರುವ;**<br>ಎಲ್ಲಾ ವಿಧದ ಪ್ರಾಥಮಿಕ ಸಹಕಾರ ಸಂಘಗಳು/ ಪ್ರಾಥಮಿಕ ಸೌಹಾರ್ದ ಸಹಕಾರಿಗಳು |

*ಮೇಲೆ ಪ್ರತ್ಯಾಯೋಜಿಸಲ್ಪಟ್ಟ ಅಧಿಕಾರಿಗಳ ವ್ಯಾಪ್ತಿಗೆ ಒಂದು ವೇಳೆ ಪ್ರತ್ಯಾಯೋಜಿಸಲ್ಪಟ್ಟಿರುವ ಸಹಕಾರ ಸಂಸ್ಥೆಗಳ ಚುನಾವಣಾ ವ್ಯಾಜ್ಯಗಳು ಇತ್ಯರ್ಥಕ್ಕೆ ಬಂದಲ್ಲಿ ಸದರಿ ವ್ಯಾಜ್ಯಗಳನ್ನು ಇತರೆ ಸೂಕ್ತ ಪ್ರಾಧಿಕಾರಕ್ಕೆ ವರ್ಗಾಯಿಸತಕ್ಕದ್ದು ಎಂಬ ಸೂಚನೆಯೊಂದಿಗೆ ಸ್ಪಷ್ಟೀಕರಣ ನೀಡಿರುವಂತೆ ಕ್ರಮವಿಡತಕ್ಕದ್ದು.*

**ವಿಶೇಷ ಸೂಚನೆ:– ಅಧಿಕಾರ ಪ್ರತ್ಯಾಯೋಜನೆಯಂತೆ ಮೇಲಿನ ಕೋಷ್ಠಕದಲ್ಲಿ ಹಂಚಿಕೆ ಮಾಡಲಾಗಿರುವ ಎಲ್ಲಾ ವಿಧದ ಪ್ರಾಥಮಿಕ ಸಹಕಾರ ಸಂಘಗಳು /ಪ್ರಾಥಮಿಕ ಸಹಕಾರಿಗಳ ಚುನಾವಣೆ ಸಂಬಂಧಿಸಿದಂತೆ ಚುನಾವಣಾಧಿಕಾರಿಗಳನ್ನು ಸೂಚಿಸದೆ ಇದ್ದಲ್ಲಿ (ಅಂತಹ ಸಂಘಗಳು ಕೈತಪ್ಪಿ ಹೋಗಿದ್ದರೆ) ಅಂತಹ ಸಂಘಗಳ ಚುನಾವಣೆಯನ್ನು ಜರುಗಿಸುವ ಸಂಬಂಧ, ಸಂಬಂಧಪಟ್ಟ ಜಿಲ್ಲಾ ಉಪ ನಿಬಂಧಕರು ಕೂಡಲೇ ಪ್ರಾಧಿಕಾರದ ಗಮನಕ್ಕೆ ತರಲು ಸೂಚಿಸಿದೆ.**

ಚುನಾವಣಾಧಿಕಾರಿಗಳು ಅವರ ಕಾರ್ಯವ್ಯಾಪ್ತಿಗೆ ಬರುವಂತಹ ಸಹಕಾರ ಸಂಘಗಳ/ಸಹಕಾರಿಗಳ ಚುನಾವಣೆಯನ್ನು ಮತ್ತು ತತ್ಪರಿಣಾಮದ ಪದಾಧಿಕಾರಿಗಳ ಚುನಾವಣೆ ನಡೆಸಲು ರಿಟರ್ನಿಂಗ್ ಅಧಿಕಾರಿ ನೇಮಕಾತಿಗೆ ಪ್ರಾಧಿಕಾರದಿಂದ ಕಾಲಕಾಲಕ್ಕೆ ನೀಡಲಾದ ಸುತ್ತೋಲೆ, ಅಧಿಸೂಚನೆ ಮತ್ತು ಮಾರ್ಗಸೂಚಿಗಳನ್ನು, ತಿದ್ದುಪಡಿಯಾದ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮಗಳು ಮತ್ತು ನಿಯಮಗಳು ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮಗಳು ಮತ್ತು ನಿಯಮಾನುಸಾರ ರಿಟರ್ನಿಂಗ್ ಅಧಿಕಾರಿಗಳನ್ನು ನೇಮಕ ಮಾಡಿಕೊಳ್ಳುವ ಮೂಲಕ ಪಾರದರ್ಶಕವಾಗಿ /ನಿಷ್ಪಕ್ಷಪಾತವಾಗಿ ಚುನಾವಣೆ ನಡೆಸಲು ಆದೇಶಿಸಿದೆ.

(ಡಾ.ಎನ್.ಎಸ್. ಚೆನ್ನಪ್ಪಗೌಡ) 29/8
**ಆಯುಕ್ತರು**
**ಸಹಕಾರ ಚುನಾವಣಾ ಪ್ರಾಧಿಕಾರ,**
**ಬೆಂಗಳೂರು.**

--6

**ಪ್ರತಿಗಳನ್ನು ಈ ಕೆಳಕಂಡವರುಗಳಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ :-**

1. ನಿರ್ದೇಶಕರು, ಸರ್ಕಾರಿ ಕೇಂದ್ರ ಮುದ್ರಣಾಲಯ, ಕೆಂಗೇರಿ, ಬೆಂಗಳೂರು ಇವರಿಗೆ ಮುಂದಿನ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸುವ ಸಲುವಾಗಿ ಕಳುಹಿಸಿದೆ.
2. ಸಹಕಾರ ಸಂಘಗಳ ಅಪರ ನಿಬಂಧಕರು, (ಪತ್ತು), (ಕೈಗಾರಿಕೆ ಮತ್ತು ಹೈನುಗಾರಿಕೆ), (ವಸತಿ ಮತ್ತು ಇತರೆ), (ಬಳಕೆ ಮತ್ತು ಮಾರಾಟ), ಸಹಕಾರ ಸಂಘಗಳ ನಿಬಂಧಕರ ಕಛೇರಿ, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು
3. ರಾಜ್ಯದ ಎಲ್ಲಾ ಪ್ರಾಂತೀಯ ಸಹಕಾರ ಸಂಘಗಳ ಜಂಟಿ ನಿಬಂಧಕರು.
4. ಸಹಕಾರ ಸಂಘಗಳ ಜಂಟಿ ನಿಬಂಧಕರು (ಪಟ್ಟಣ ಬ್ಯಾಂಕುಗಳ ವಿಭಾಗ), (ಕಾನೂನು ಕೋಶ), ಸಹಕಾರ ಸಂಘಗಳ ನಿಬಂಧಕರ ಕಛೇರಿ, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು
5. ಸಹಕಾರ ಸಂಘಗಳ ಅಪರ ನಿಬಂಧಕರು, ಕಾಡಾ, ಬೆಳಗಾವಿ
6. ಸಹಕಾರ ಸಂಘಗಳ ಜಂಟಿ ನಿಬಂಧಕರು – ಚುನಾವಣೆ /ಕಾರ್ಯದರ್ಶಿ, ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು.
7. ಸಹಕಾರ ಸಂಘಗಳ ಜಂಟಿ ನಿಬಂಧಕರು, ಕಾಡಾ, ಕಲಬುರಗಿ
8. ರಾಜ್ಯದ ಎಲ್ಲಾ ಜಿಲ್ಲೆಗಳ ಸಹಕಾರ ಸಂಘಗಳ ಉಪನಿಬಂಧಕರು,

**ಪ್ರತಿಗಳನ್ನು ಈ ಕೆಳಕಂಡವರುಗಳಿಗೆ ಮಾಹಿತಿಗಾಗಿ ಕಳುಹಿಸಿದೆ :-**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಹಕಾರ ಇಲಾಖೆ, ಬಹುಮಹಡಿಗಳ ಕಟ್ಟಡ, 6ನೇ ಮಹಡಿ, ಬೆಂಗಳೂರು-01.
2. ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ನಂ.1, ಅಲಿ ಆಸ್ಕರ್ ರಸ್ತೆ, ಬೆಂಗಳೂರು-52.
3. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ.
4. ರಾಜ್ಯದ ಎಲ್ಲಾ ಜಿಲ್ಲೆಗಳ ಆರಕ್ಷಕಅಧೀಕ್ಷಕರಿಗೆ.
5. ರಾಜ್ಯದ ಎಲ್ಲಾ ಉಪವಿಭಾಗಗಳ ಸಹಕಾರ ಸಂಘಗಳ ಸಹಾಯಕ ನಿಬಂಧಕರುಗಳಿಗೆ.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕರಾಜ್ಯ ಸಹಕಾರ ಮಹಾಮಂಡಳ ನಿಯಮಿತ, ರೇಸ್‌ಕೋರ್ಸ್‌ರಸ್ತೆ, ಬೆಂಗಳೂರು ಇವರಿಗೆ ಮುಂದಿನ ಸಹಕಾರ ವಾರ ಪತ್ರಿಕೆಯಲ್ಲಿ ಪ್ರಕಟಿಸುವ ಸಲುವಾಗಿ.
7. ಸಹಕಾರ ಸಂಘಗಳ ಜಂಟಿ ನಿಬಂಧಕರು, ರೇಷ್ಮೆ ಇಲಾಖೆ/ಜವಳಿ ಇಲಾಖೆ/ಸಕ್ಕರೆ ಅಭಿವೃದ್ಧಿ ಆಯುಕ್ತರು, ಬೆಂಗಳೂರು.
8. ಪ್ರಾಧಿಕಾರದ ಅಧಿಕಾರಿ / ಸಿಬ್ಬಂದಿ / ರಕ್ಷಣಾ ಕಡತಕ್ಕೆ.